**ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್**

**ಸಿ.ಸಿ ನಂ.776/2021**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ನಿಂಗಪ್ಪ ಪಸಾರಿ | ಪಿಡಬ್ಲ್ಯೂ | 5 |
| ತಂದೆಃಗಂಡನ ಹೆಸರು | : | ಗುಡ್ಡಪ್ಪ | ಸಿಡಬ್ಲ್ಯೂ | 8 |
| ವಯಸ್ಸು | : | 38 ವರ್ಷ | | |
| ಉದ್ಯೋಗ | : | ಕೂಲಿ ಕೆಲಸ | | |
| ವಾಸ ಸ್ಥಳ | : | ಕಾಲ್ವೆ ಕಲ್ಲಾಪುರ | | |

**ದಿನಾಂಕ: 07.01.2025 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ನನಗೆ ಚಾಸಾ-1 ರವರ ಪರಿಚಯ ಇರುವುದಿಲ್ಲ. ನನಗೆ ಚಾಸಾ-6, 7 ಮತ್ತು 9 ಪರಿಚಯ ಇರುವುದಿಲ್ಲ. ಆರೋಪಿಯ ಪರಿಚಯ ಇದೆ. ಈ ಕೇಸಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಕಳೆದ 8 ವರ್ಷಗಳ ಹಿಂದೆ ನಾನು ಬೆಳಗಾಲಪೇಟೆಯಿಂದ ಆರೋಪಿಗೆ ಸಂಬಂಧಪಟ್ಟ ಬೈಕ್ ಮೂಲಕ ಕಾಲ್ವೆ ಕಲ್ಲಾಪುರ ಗ್ರಾಮಕ್ಕೆ ಬರುತ್ತಿರುವಾಗ ಹೊಂಬಳಿ ಗ್ರಾಮದ ಹತ್ತಿರ ಅಪಘತವಾಗಿರುತ್ತದೆ. ಆದರೆ ಯಾರ ತಪ್ಪಿನಿಂದ ಈ ಅಪಘಾತವಾಗಿದೆ ಎಂಬುದು ನನಗೆ ಗೊತ್ತಿಲ್ಲ. ಇದರಿಂದ ನನಗೆ ಪ್ರಜ್ಞೆ ತಪ್ಪಿದ್ದು ಆ ನಂತರ ಏನಾಯಿತು ಎಂಬುದು ನನಗೆ ಗೊತ್ತಿಲ್ಲ. ಇದರಿಂದ ನನಗೆ ತಲೆಯ ಎಡಭಾಗಕ್ಕೆ ಪೆಟ್ಟಾಗಿ ರಕ್ತ ಗಾಯಗಳಾದವು ಈ ಬಗ್ಗೆ ನಾನು ಹಾವೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದೆನು. ಈ ಅಪಘಾತಕ್ಕೆ ಸಂಬಧಪಟ್ಟಂತೆ ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಗಿದೆ)**

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ**

ದಿನಾಂಕ 23.11.2015 ರಂದು ಸಂಜೆ 06.30 ಗಂಟೆ ಸಮಯದಲ್ಲಿ ಆರೋಪಿಗೆ ಸಂಬಂಧಪಟ್ಟ ಸ್ಪ್ಲೆಂಡರ ಮೋಟಾರ್ ಸೈಲ್ ನಂಬರ ಕೆ ಎ 27/ಎಸ್-1822 ನೇದ್ದನ್ನು ಆರೋಪಿ ಚಲಾಯಿಸುತ್ತಿದ್ದು ಆ ಬೈಕ್ ನ ಹಿಂಬದಿಯಲ್ಲಿ ನಾನು ಕುಳಿತಿದ್ದು ಆ ಬೈಕ್ ನ್ನು ಆರೋಪಿ ಅತೀ ವೇಗವಾಗಿ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಹೋಗಿ ಬಿಂಗಾಪುರ ದಾಟಿದ ನಂತರ ಹೊಂಬಳಿ ಕಡೆಯಿಂದ ಬರುತ್ತಿದ್ದ ಮೋಟಾರ್ ಸೈಕಲ್ ನಂಬರ ಕೆ ಎ 27/ಈ ಈ-5882 ಕ್ಕೆ ಡಿಕ್ಕಿ ಪಡಿಸಿದನು ಎಂದರೆ ಸರಿಯಲ್ಲ. ಇದರಿಂದ ನಾನು ಮತ್ತು ಎದುರುಗಡೆಯಿಂದ ಬರುತ್ತಿದ್ದ ಬೈಕ್ ಸವಾರ ಚಾಸಾ-6 ಹಾಗೂ ಆರೋಪಿ ಕಳೆಗಡೆ ಬಿದ್ದೇವು ಎಂದರೆ ಸರಿ. ಈ ಅಪಘಾತದಿಂದ ಆರೋಪಿಗೂ ಸಹ ಸಣ್ಣ ಪುಟ್ಟ ಗಾಯಗಳು ಆಗಿದ್ದವು ಎಂದರೆ ನನಗೆ ಗೊತ್ತಿಲ್ಲ. ಈ ಅಪಘಾತದಿಂದ ನನಗೆ, ಚಾಸಾ-6 ಮತ್ತು 7 ರವರಿಗೂ ಸಹ ಗಾಯಗಳು ಆದವು ಎಂದರೆ ಸರಿಯಲ್ಲ. ಈ ಸಂಬಂಧ ಪೋಲಿಸರು ನನ್ನ ಹೇಳಿಕೆಯನ್ನು ಪಡೆದರು ಎಂದರೆ ಸರಿಯಲ್ಲ. ಆ ಅಲ್ಲ ಗಳೆದ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ನನಗೆ ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಸಂಬಂಧ ಚಾಸಾ-1 ರವರು ಪೋಲಿಸರಿಗೆ ದೂರು ನೀಡಿದರು ಎಂದರೆ ಸರಿ.

**:ಪಾಟೀ ಸವಾಲು: ಆರೋಪಿ ಪರ ಶ್ರೀ.ಎಸ್ ಜಿ ಟಿ ವಕೀಲರಿಂದ:**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಹಾನಗಲ್

ಸಾಕ್ಷಿಧಾರರ ಸಹಿ